**ಕರ್ನಾಟಕ ವಿಧಾನ ಪರಿಷತ್ತು**

**146ನೇ ಅಧಿವೇಶನ**

**ಸಂತಾಪ ಸೂಚನೆಗಳು**

**ಮಾನ್ಯ ಸಭಾಪತಿಯವರು:–**

**ವಿಧಾನ ಸಭೆಯ ಮಾಜಿ ಸದಸ್ಯರು ಹಾಗೂ ಮಾಜಿ ಸಚಿವರಾದ ಡಾ: ಜೆ. ಅಲೆಕ್ಸಾಂಡರ್, ರಾಜ್ಯ ಸಭೆಯ ಮಾಜಿ ಸದಸ್ಯರಾದ ಕೆ.ಆರ್. ಜಯದೇವಪ್ಪ, ರಾಜ್ಯ ಸಭೆಯ ಮಾಜಿ ಸದಸ್ಯರು ಹಾಗೂ ಲೋಕಸಭೆಯ ಮಾಜಿ ಸದಸ್ಯರಾದ ಹನುಮಂತಗೌಡ ಭೀಮನಗೌಡ ಪಾಟೀಲ್, ಭಾರತ ರತ್ನ, ದಾದಾಸಾಹೇಬ ಪಾಲ್ಕೆ ಪ್ರಶಸ್ತಿ ಪುರಸ್ಕೃತರಾದ ಡಾ: ಲತಾ ಮಂಗೇಶ್ಕರ್, ಕನ್ನಡದ ಸಾಹಿತಿ ಚಂದ್ರಶೇಖರ ಪಾಟೀಲ, ಭಾವಕ್ಯತೆಯ ಸಂತರಾದ ಇಬ್ರಾಹಿಂ ಸುತಾರ ಜಾನಪದ ಕಲಾವಿದರಾದ ಬಸವಲಿಂಗಯ್ಯ ಹಿರೇಮಠ ಹಾಗೂ ಪರಿಸರ ಸಂರಕ್ಷಕ ಮಹದೇವ ಬುದೋ ವೇಳಿಪ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**1. ಡಾ: ಜೆ. ಅಲೆಕ್ಸಾಂಡರ್**

**ವಿಧಾನ ಸಭೆಯ ಮಾಜಿ ಸದಸ್ಯರು ಹಾಗೂ ಮಾಜಿ ಸಚಿವರಾದ ಡಾ: ಜೆ. ಅಲೆಕ್ಸಾಂಡರ್‌ರವರು ದಿನಾಂಕ: 14.01.2022ರಂದು ನಿಧನ ಹೊಂದಿರುತ್ತಾರೆ.**

1938ರ ಆಗಸ್ಟ್, 8ರಂದು ಕೇರಳದ ಕೊಲ್ಲಂ ಜಿಲ್ಲೆಯ ಮನ್‌ಗಡ್‌ನಲ್ಲಿ ಜನಿಸಿದ್ದ ಶ್ರೀಯುತರು ಎಂ.ಎ., ಪಿ.ಹೆಚ್‌ಡಿ., ಪದವೀಧರಾಗಿದ್ದರು. 1963ರಲ್ಲಿ ಭಾರತೀಯ ಆಡಳಿತ ಸೇವೆಗೆ ಆಯ್ಕೆಯಾಗಿ ಕರ್ನಾಟಕದ ಸೇವೆಗೆ ನಿಯೋಜಿತಗೊಂಡಿದ್ದ ಶ್ರೀಯುತರು ವಿವಿಧ ಇಲಾಖೆಯ ಹಲವಾರು ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದರು. 1992ರಲ್ಲಿ ರಾಜ್ಯದ ಮುಖ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದ ಶ್ರೀಯುತರು ನಿವೃತ್ತಿಯ ನಂತರ ಕಾಂಗ್ರೆಸ್ ಪಕ್ಷದಿಂದ ಭಾರತಿನಗರ ವಿಧಾನಸಭಾ ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಯಾಗಿದ್ದರು. ಶ್ರೀ ಎಸ್.ಎಂ.ಕೃಷ್ಣ ಅವರ ಸಂಪುಟದಲ್ಲಿ ಪ್ರವಾಸೋದ್ಯಮ ಸಚಿವರಾಗಿ ಕಾರ್ಯನಿರ್ವಹಿಸಿದ್ದ ಶ್ರೀಯುತರು ಬೆಂಗಳೂರು ನಗರದ ವೈ.ಎಂ.ಸಿ.ಎ. ಅಧ್ಯಕ್ಷರಾಗಿ 30 ವರ್ಷಗಳಿಗೂ ಹೆಚ್ಚುಕಾಲ ಸೇವೆಯನ್ನು ಸಲ್ಲಿಸಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಆಡಳಿತಗಾರ ಹಾಗೂ ಸಜ್ಜನ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**2. ಕೆ.ಆರ್. ಜಯದೇವಪ್ಪ**

**ರಾಜ್ಯ ಸಭೆಯ ಮಾಜಿ ಸದಸ್ಯರಾದ ಕೆ.ಆರ್. ಜಯದೇವಪ್ಪರವರು ದಿನಾಂಕ: 23.12.2021ರಂದು ನಿಧನ ಹೊಂದಿರುತ್ತಾರೆ.**

ಮೂಲತ: ದಾವಣಗೆರೆಯವರಾಗಿದ್ದು, ವೃತ್ತಿಯಲ್ಲಿ ವಕೀಲರಾಗಿದ್ದರು. ಭಾರತ ಸೇವಾದಳದ ನಿಷ್ಠಾವಂತ ಕಾರ್ಯಕರ್ತರಾಗಿದ್ದು, ರಾಜಕೀಯ, ಸಾಮಾಜಿಕ, ಧಾರ್ಮಿಕ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ಅಪಾರ ಸೇವೆಯನ್ನು ಸಲ್ಲಿಸಿದ್ದ ಶ್ರೀಯುತರು 1992 ರಿಂದ 1998ರ ಅವಧಿಯಲ್ಲಿ ರಾಜ್ಯ ಸಭೆಯ ಸದಸ್ಯರಾಗಿ ಸೇವೆಯನ್ನು ಸಲ್ಲಿಸಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಸರಳ, ಸಜ್ಜನಿಕೆಯ ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 3. ಡಾ: ಲತಾ ಮಂಗೇಶ್ಕರ್

**ರಾಜ್ಯ ಸಭೆ ಮಾಜಿ ಸದಸ್ಯರು ಹಾಗೂ 'ಭಾರತ ರತ್ನ' ಗಾನ ಕೋಗಿಲೆ, ಭಾರತೀಯ ಸಂಗೀತಲೋಕ ಕಂಡ ಅನುಪಮ ಗಾಯಕಿ ಡಾ: ಲತಾ ಮಂಗೇಶ್ಕರ್ ಅವರು ದಿನಾಂಕ: 06.02.2022 ರಂದು ನಿಧನ ಹೊಂದಿರುತ್ತಾರೆ.**

1929ರ ಸೆಪ್ಟೆಂಬರ್, 28 ರಂದು ಮಧ್ಯಪ್ರದೇಶದ ಇಂದೋರ್‌ನಲ್ಲಿ ಜನಿಸಿದ್ದ ಶ್ರೀಯುತರು ತಮ್ಮ ತಂದೆಯವರಿಂದಲೇ 5ನೇ ವಯಸ್ಸಿನಲ್ಲಿಯೇ ಸ್ವರಾಭ್ಯಾಸ ಪ್ರಾರಂಭಿಸಿ 13ನೇ ವಯಸ್ಸಿನಲ್ಲಿ ವೃತ್ತಿ ಜೀವನ ಪ್ರಾರಂಭಿಸಿದರು. 1999 ರಿಂದ 2005ರವರೆಗೆ ರಾಜ್ಯಸಭಾ ಸದಸ್ಯರಾಗಿ ನಾಮನಿರ್ದೇಶನ ಹೊಂದಿರುತ್ತಾರೆ. ಗಾಯನದಲ್ಲಷ್ಟೇ ಅಲ್ಲದೆ ನಟನೆ, ಸಂಗೀತ ಸಂಯೋಜನೆ, ಚಲನಚಿತ್ರ ನಿರ್ಮಾಣ, ಸಂಗೀತ ಕಾರ್ಯಕ್ರಮಗಳ ನಿರ್ವಹಣೆ ಮುಂತಾದ ಕ್ಷೇತ್ರಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು.

1963ರಲ್ಲಿ ಅಂದಿನ ಪ್ರಧಾನಿ ಜವಾಹರಲಾಲ್ ನೆಹರು ಅವರ ಸಮ್ಮುಖದಲ್ಲಿ ಲಕ್ಷಾಂತರ ಭಾರತೀಯರ ಮುಂದೆ ಹಾಡಿದ "ಏ ಮೇರೆ ವತನ್ ಕೆ ಲೋಗೋ' ಹಾಡು ಅಂದು ಪ್ರಧಾನಿಯವರೇ ಕಣ್ಣೀರು ಹಾಕುವಂತೆ ಮಾಡಿದ್ದಲ್ಲದೆ ದೇಶಾದ್ಯಂತ ಸಂಚಲನವನ್ನು ಮೂಡಿಸಿತ್ತು. ಇಂದಿಗೂ ಆ ಹಾಡನ್ನು ಆಲಿಸಿದರೆ ಪ್ರತಿಯೊಬ್ಬ ಭಾರತೀಯನ ಮನದಲ್ಲಿ ದೇಶ ಪ್ರೇಮದ ರೋಮಾಂಚನವಾಗುತ್ತದೆ ಹಾಗೂ ಅಶ್ರುಬಿಂದುಗಳು ತುಂಬುತ್ತವೆ. ಕೇವಲ ಚಲನಚಿತ್ರ ಗೀತೆಗಳಲ್ಲದೆ ಭಕ್ತಿಗೀತೆ, ದೇಶ ಪ್ರೇಮಗೀತೆ, ಭಾವಗೀತೆ, ಅಭಂಗ್, ಗಝಲ್, ದೋಹೆ ಸೇರಿದಂತೆ ಸಂಗೀತದ ಎಲ್ಲಾ ಪ್ರಕಾರಗಳಲ್ಲಿಯೂ ಸಂಗೀತ ಸುಧೆ ಹರಿಸಿ ತಮ್ಮ ಸ್ವರಮಾಧುರ್ಯದ ಮೂಲಕ ಗಾಯನ ಲೋಕವನ್ನು ಶ್ರೀಮಂತಗೊಳಿಸಿದ್ದ ಕೀರ್ತಿ ಅವರಿಗೆ ಸಲ್ಲುತ್ತದೆ.

1974ರಲ್ಲಿ ಲಂಡನ್‌ನ ರಾಯಲ್ ಆಲ್ಬರ್ಟ್ ಹಾಲ್‌ನಲ್ಲಿ ಪ್ರದರ್ಶನ ನೀಡಿದ ಮೊದಲ ಭಾರತೀಯ ಗಾಯಕಿಯಾಗಿರುತ್ತಾರೆ. ಕೆನಡಾದ ಟೊರಾಂಟೋದಲ್ಲಿ ಸಂಗೀತ ಕಾರ್ಯಕ್ರಮ ನೀಡಿದ ಜೂನ್, 9ನ್ನು ಏಷ್ಯಾದಿನವೆಂದು ಘೋಷಿಸಲಾಗಿದೆ. ಕನ್ನಡವೂ ಸೇರಿದಂತೆ ಭಾರತದ 36 ಭಾಷೆಗಳಲ್ಲಿ ಹಾಗೂ ವಿದೇಶಿ ಭಾಷೆಗಳಲ್ಲಿಯೂ ಹಾಡಿ ತಮ್ಮ ಅಪ್ರತಿಮ ಗಾನ ಪ್ರತಿಭೆ ಮೂಲಕ ದೇಶ ವಿದೇಶಗಳ ಕೋಟ್ಯಂತರ ಸಂಗೀತ ಪ್ರೇಮಿಗಳ ಹೃದಯದಲ್ಲಿ ಚಿರಸ್ಥಾಯಿಯಾಗಿದ್ದಾರೆ. ಶ್ರೀಯುತರು ಪುಟ್ಟ ಮಕ್ಕಳಿಂದ ಹಿಡಿದು ಸಂಗೀತದ ದಿಗ್ಗಜರವರೆಗೆ ಹಿರಿಯರು ಕಿರಿಯರು ಎಲ್ಲರನ್ನು ಗೌರವಪೂರ್ಣವಾಗಿ ನಡೆಸಿಕೊಳ್ಳುತ್ತಿದ್ದು ನೈಜ ಸಂಗೀತ, ಸಾಂಸ್ಕೃತಿಕ ರಾಯಭಾರಿಯಾಗಿದ್ದರು.

ಶ್ರೀಯುತರು ಭಾರತ ರತ್ನ, ಪದ್ಮಭೂಷಣ, ಪದ್ಮ ವಿಭೂಷಣ ಪ್ರಶಸ್ತಿ, ದಾದಾ ಸಾಹೇಬ್ ಫಾಲ್ಕೆ, ದೇಶದ 60ನೇ ಸ್ವಾತಂತ್ರೋತ್ಸವ ನಿಮಿತ್ತ ಜೀವಮಾನ ಸಾಧನೆ ಗೌರವ, ಲಂಡನ್‌ನ ಐಐಎಫ್‌ಎನಿಂದ ಜೀವಮಾನ ಸಾಧನೆ ಪ್ರಶಸ್ತಿ, ನ್ಯೂಯಾರ್ಕ್ ಯೂನಿವರ್ಸಿಟಿ ಸೇರಿದಂತೆ ಆರು ವಿಶ್ವವಿದ್ಯಾಲಯಗಳ ಗೌರವ ಡಾಕ್ಟರೇಟ್ ಪ್ರಶಸ್ತಿ, ನಾಲ್ಕು ಫಿಲಂಫೇರ್ ಪ್ರಶಸ್ತಿಗಳು ಸೇರಿದಂತೆ ಇತರೆ ಅಸಂಖ್ಯಾತ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

ಸಂಗೀತ ಲೋಕದ ದಂತಕಥೆ, ಭಾರತೀಯ ಸಂಸ್ಕೃತಿಯ ಅನರ್ಘ್ಯರತ್ನ, ಭಾರತದ ನೈಟಿಂಗೇಲ್, ವಿಶ್ವವಿಖ್ಯಾತ ಗಾಯಕಿ, ಭಾರತ ರತ್ನ ಪುರಸ್ಕೃತ, ಸಪ್ತಸ್ವರಗಳ ಗಾನಕೋಗಿಲೆ ನಿಧನದಿಂದ ಭಾರತದ ಸಾರಸ್ವತ ಲೋಕದ ಮಹತ್ವದ ಯುಗದ ಅಂತ್ಯವಾಗಿದೆ. ಶ್ರೀಯುತರ ನಿಧನದಿಂದಾಗಿ ಭಾರತೀಯ ಚಲನಚಿತ್ರರಂಗದ ಮೇರು ಗಾನ ಗಂಧರ್ವ ಧ್ರುವತಾರೆಯೊಂದು ಅಸ್ತಂತಗವಾಗಿದೆ. ಸ್ವರಬ್ರಹ್ಮ ಎಂಬ ಖ್ಯಾತ ನಾಮಕ್ಕೆ ಅನ್ವರ್ಥರಾಗಿದ್ದ ಶ್ರೀಯುತರು ತಮ್ಮ ಮಧುರ ಧ್ವನಿಯ ಗಾಯನ ಗೀತೆಗಳ ಮೂಲಕ ಜನ ಮಾನಸದಲ್ಲಿ ಅಚ್ಚಳಿಯದೆ ಚಿರಸ್ಥಾಯಿಯಾಗಿ ಉಳಿದಿರುತ್ತಾರೆ.

## 4. ಹನುಮಂತಗೌಡ ಭೀಮನಗೌಡ ಪಾಟೀಲ್

**ಲೋಕಸಭೆಯ ಮಾಜಿ ಸದಸ್ಯರಾದ ಹನುಮಂತಗೌಡ ಭೀಮನಗೌಡ ಪಾಟೀಲ್ ರವರು ದಿನಾಂಕ: 01.02.2022ರಂದು ನಿಧನ ಹೊಂದಿರುತ್ತಾರೆ.**

ಮೂಲತ: ಬಾಗಲಕೋಟೆಯವರಾಗಿದ್ದು, ವೃತ್ತಿಯಲ್ಲಿ ಶಿಕ್ಷಕರಾಗಿದ್ದು ನಂತರ ಶಿಕ್ಷಕ ವೃತ್ತಿ ತ್ಯಜಿಸಿ ಬಾದಾಮಿ ತಾಲ್ಲೂಕು ಬೋರ್ಡ್ ಸದಸ್ಯರಾಗಿ ಚುನಾಯಿತರಾಗುವ ಮೂಲಕ ರಾಜಕೀಯ

ಕ್ಷೇತ್ರ ಪ್ರವೇಶಿಸಿದ್ದರು. ಬಾಗಲಕೋಟೆ ಸಹಕಾರಿ ನೂಲಿನ ಗಿರಣಿ ಆಡಳಿತ ಮಂಡಳಿಯ ಅಧ್ಯಕ್ಷರಾಗಿ, ಕರ್ನಾಟಕ ರಾಜ್ಯ ಸಹಕಾರ ನೂಲಿನ ಗಿರಣಿಗಳ ಮಹಾಮಂಡಳದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಶ್ರೀಯುತರು 1984ರಲ್ಲಿ ಬಾಗಲಕೋಟೆ ಲೋಕಸಭಾ ಕ್ಷೇತ್ರದಿಂದ ಚುನಾಯಿತರಾಗಿ ಸೇವೆಯನ್ನು ಸಲ್ಲಿಸಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಸರಳ ಸಜ್ಜನಿಕೆಯ ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 5. ಚಂದ್ರಶೇಖರ ಪಾಟೀಲ

**ಕನ್ನಡದ ಸಾಹಿತಿ, ಕವಿ, ನಾಟಕಕಾರ, ಸಂಪಾದಕರು, ಸಂಘಟನಕಾರ ಹಾಗೂ ಕನ್ನಡದ ಹೋರಾಟಗಾರರಾಗಿದ್ದ ಚಂದ್ರಶೇಖರ ಪಾಟೀಲ ಅವರು ದಿನಾಂಕ: 10.01.2022ರಂದು ನಿಧನ ಹೊಂದಿರುತ್ತಾರೆ.**

1939ರ ಜೂನ್, 18ರಂದು ಹಾವೇರಿ ಜಿಲ್ಲೆಯ ಸವಣೂರು ತಾಲ್ಲೂಕಿನ, ಹತ್ತೀಮತ್ತೂರು ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಇಂಗ್ಲಿಷ್ ಎಂ.ಎ., ಪದವೀಧರರಾಗಿದ್ದು, ಇಂಗ್ಲೆಂಡಿನ ಲೀಡ್ಸ್ ವಿಶ್ವವಿದ್ಯಾಲಯದಿಂದ ಭಾಷಾಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದಿದ್ದರು. ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಅಂಗ್ಲ ಉಪನ್ಯಾಸಕರಾಗಿ ಬೋಧಕ ವೃತ್ತಿಯನ್ನು ಆರಂಭಿಸಿದ ಶ್ರೀಯುತರು ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಲೇ ಕಾವ್ಯ ಹಾಗೂ ನಾಟಕಗಳ ಮೂಲಕ ಪ್ರಸಿದ್ಧರಾಗಿದ್ದರು. ಸಾಹಿತ್ಯ ಲೋಕದಲ್ಲಿ ಚಂಪಾ ಎಂಬ ಹೆಸರಿನಿಂದ ಜನಜನಿತರಾಗಿದ್ದರು. ಶ್ರೀಯುತರು ಗೋಕಾಕ ಚಳುವಳಿ ಸೇರಿದಂತೆ ಅನೇಕ ಚಳುವಳಿಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಜೆ.ಪಿ. ಆಂದೋಲನದಲ್ಲಿ ಜೈಲುವಾಸ ಸಹ ಅನುಭವಿಸಿದ್ದರು. ರಾಜ್ಯ ಬಂಡಾಯ ಸಾಹಿತ್ಯ ಸಂಘಟನೆಯ ಸಂಚಾಲಕರಾಗಿ ಮುಂಚೂಣಿಯಲ್ಲಿದ್ದರು. ಕಾವ್ಯ ಕೃಷಿಯಲ್ಲೇ ತೊಡಗಿಸಿಕೊಂಡಿದ್ದ ಶ್ರೀಯುತರು ನಾಟಕ ಮಾಧ್ಯಮವನ್ನು ಆಯ್ದುಕೊಂಡು ಹಲವಾರು ನಾಟಕಗಳನ್ನೂ ರಚಿಸಿದ್ದಾರೆ. ಅವುಗಳಲ್ಲಿ ಕೊಡೆಗಳು, ಅಪ್ಪ, ಕುಂಟ ಕುಂಟ ಕುರುವತ್ತಿ, ನಳಕವಿಯ ಮಸ್ತಕಾಭಿಷೇಕ ಮುಂತಾದ ನಾಟಕಗಳು ಪ್ರಖ್ಯಾತವಾಗಿವೆ. ಸಂಕ್ರಮಣ ಕಾವ್ಯ, ಗಾಂಧಿ ಗಾಂಧಿ, ನೆಲ್ಸನ್‌ಮಂಡೇಲಾ ಮುಂತಾದ ಕೃತಿಗಳು ಇವರ ಸಂಪಾದಿತ ಕೃತಿಗಳಾಗಿವೆ.

ಶ್ರೀಯುತರು ಸ್ನೇಹಿತರೊಡಗೂಡಿ, ಸಂಪಾದಕರಾಗಿ ಸಂಕ್ರಮಣ ಪತ್ರಿಕೆಯನ್ನು ಪ್ರಾರಂಭಿಸಿದ್ದರು. ಈ ಪತ್ರಿಕೆಯು ಎಪ್ಪತ್ತರ ದಶಕದ ನಂತರ ದಲಿತ, ಬಂಡಾಯ ಸಾಹಿತ್ಯ ಚಳುವಳಿ

ಮುಂತಾದವುಗಳನ್ನು ಒಳಗೊಂಡು ಹಲವಾರು ಯುವ ಬರಹಗಾರರಿಗೆ ವೇದಿಕೆಯನ್ನು ಕಲ್ಪಿಸಿದ ಕೀರ್ತಿಗೆ ಭಾಜನರಾಗಿದ್ದಾರೆ.

ಸಾಹಿತಿ, ಕವಿ, ನಾಟಕಕಾರ, ಸಂಘಟನಕಾರ, ಪತ್ರಿಕಾ ಸಂಪಾದಕ, ಕನ್ನಡ ಹೋರಾಟಗಾರರಾಗಿ ಎಲ್ಲಾ ರಂಗಗಳಲ್ಲಿಯೂ ಅಪ್ರತಿಮ ಸೇವೆಯನ್ನು ಸಲ್ಲಿಸಿದ್ದ ಶ್ರೀಯುತರು ಕನ್ನಢ ಸಾಹಿತ್ಯ ಪರಿಷತ್ತು ಮತ್ತು ಕನ್ನಡ ಅಭಿವೃದ್ಧಿ ಪ್ರಾಧಕಾರದ ಅಧ್ಯಕ್ಷರಾಗಿಯು ಸೇವೆಯನ್ನು ಸಲ್ಲಿಸಿದ್ದಾರೆ. ಶ್ರೀಯುತರು ಕರ್ನಾಟಕ ಸಾಹಿತ್ಯ ಅಕಾಡೆಮಿ ಗೌರವ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಪಂಪ ಪ್ರಶಸ್ತಿ, ಸಂದೇಶ್ ಮಾಧ್ಯಮ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಇವರ ನಿಧನದಿಂದಾಗಿ ರಾಜ್ಯವು ಹಿರಿಯ ಕವಿ, ಹೋರಾಟಗಾರ ಬಹುಮುಖ ಪ್ರತಿಭೆಯ ಸರಳ, ಸಜ್ಜನ ಸಾಹಿತಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 6. ಇಬ್ರಾಹಿಂ ಸುತಾರ

**ಕನ್ನಡದ ಕಬೀರರೆಂದೇ ಖ್ಯಾತರಾಗಿದ್ದ ಇಬ್ರಾಹಿಂ ಸುತಾರ ಅವರು ದಿನಾಂಕ: 05.02.2022ರಂದು ನಿಧನ ಹೊಂದಿರುತ್ತಾರೆ.**

1940ರ ಮೇ, 10ರಂದು ಬಾಗಲಕೋಟೆ ಜಿಲ್ಲೆಯ, ರಬಕವಿ–ಬನಹಟ್ಟಿ ತಾಲ್ಲೂಕಿನ ಮಹಾಲಿಂಗಪುರದಲ್ಲಿ ಬಡಗಿತನ ವೃತ್ತಿಯ ಕುಟುಂಬದಲ್ಲಿ ಜನಿಸಿದ್ದ ಶ್ರೀಯುತರು ವೃತ್ತಿಯಲ್ಲಿ ನೇಕಾರರಾಗಿದ್ದರು. ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಕುಡಚಿಯ ಸೂಫಿ ಸಂತರಾದ ಹಜರತ್ ಶೇಖುಲ್ ಮಸಾಯಿಕ್ ಜುನ್ನೇದಿ ಅವರಿಂದ ಗುರುದೀಕ್ಷೆ ಪಡೆದು ಭಜನೆ ಮತ್ತು ಪ್ರವಚನ ಸಾಹಿತ್ಯ ಸೇವೆಗಳಲ್ಲಿ ತೊಡಗಿಸಿಕೊಂಡಿದ್ದರು. ಶರಣ ಲೋಕ, ಸಿದ್ದಾರೂಢ ಪರಂಪರೆ, ಸೂಫಿ ಸಂತರ ಪರಂಪರೆ, ಕುರಾನ್, ಭಗವದ್ಗೀತೆಗಳ ಅಧ್ಯಯನವನ್ನು ಆಳವಾಗಿ ಮಾಡಿದ್ದ ಶ್ರೀಯುತರು ತತ್ವಪದ, ವಚನ, ಭಾವೈಕ್ಯತೆಗಳ ಸಂಗಮವಾಗಿದ್ದರು. ಎಲ್ಲಾ ಧರ್ಮಗಳ ಮರ್ಮವು ಒಂದೇ, ಬಲ್ಲಿದ ಗುರುಗಳ ಬೋಧನೆ ಒಂದೇ ಎನ್ನುತ ತತ್ವಶಾಸ್ತ್ರ, ಧಾರ್ಮಿಕ ಮೌಲ್ಯ, ಆಧ್ಯಾತ್ಮಿಕ ಅನ್ವೇಷಣೆ, ಜೀವನ ಮೌಲ್ಯಗಳ ಜೊತೆ ಜೊತೆಯಲ್ಲೇ ರಾಷ್ಟ್ರೀಯ ಐಕ್ಯತೆಗೆ ಒತ್ತುಕೊಟ್ಟಿದ್ದರು. ಧರ್ಮ, ವರ್ಗ, ಜಾತಿ ನೆಪದಲ್ಲಿ ಕಿತ್ತಾಡುವವರ ಮನ:ಪರಿವರ್ತನೆ ಮಾಡಿಸುತ್ತಿದ್ದ ಶ್ರೀಯುತರು ಧಾರ್ಮಿಕ ಸಮನ್ವಯತೆ ಮತ್ತು ಸೌಹಾರ್ದತೆಯ ಹರಿಕಾರರಾಗಿದ್ದರು. ಆಧ್ಯಾತ್ಮ ಲೋಕ, ಸಾಹಿತ್ಯ ಲೋಕ, ಜನಪದ ಲೋಕ ತಮ್ಮತ್ತ ತಿರುಗಿ ನೋಡುವಂತೆ ಮಾಡಿದ್ದರು. ಕರ್ನಾಟಕವಲ್ಲದೆ ನೆರೆಯ

ಮಹಾರಾಷ್ಟ್ರ, ಆಂಧ್ರ ಪ್ರದೇಶ, ಗೋವಾ, ಕೇರಳ ರಾಜ್ಯಗಳಲ್ಲೂ ತಮ್ಮ ಪ್ರವಚನದಿಂದ ಖ್ಯಾತರಾಗಿದ್ದ ಶ್ರೀಯುತರು ಕನ್ನಡದ ಕಬೀರರೆಂದೇ ಹೆಸರಾಗಿದ್ದರು.

ಶ್ರೀಯುತರು ಪದ್ಮಶ್ರೀ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಕಥಾಕೀರ್ತನ ಕ್ಷೇತ್ರದ ಕರ್ನಾಟಕ ಕಲಾಶ್ರೀ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಭಾರತೀಯತೆ ಸಾರಿದ ಭಾವ್ಯಕ್ಯತೆಯ ಶ್ರೇಷ್ಠ ಸಂತರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 7. ಬಸವಲಿಂಗಯ್ಯ ಹಿರೇಮಠ

**ಖ್ಯಾತ ಜಾನಪದ ಕಲಾವಿದರಾದ ಬಸವಲಿಂಗಯ್ಯ ಹಿರೇಮಠ ಅವರು ದಿನಾಂಕ: 09.01.2022ರಂದು ನಿಧನ ಹೊಂದಿರುತ್ತಾರೆ.**

1959ರಲ್ಲಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಬೈಲೂರು ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಎಂ.ಎ.(ಜಾನಪದ) ಪದವೀಧರಾಗಿದ್ದರು. ನೀನಾಸಂನಿಂದ ಶಿಕ್ಷಣ ಪಡೆದು ಸುಗಮ ಸಂಗೀತ ಕ್ಷೇತ್ರದಲ್ಲಿ ಗಾಯಕರಾಗಿ ರಾಜ್ಯಾದ್ಯಂತ ಪ್ರಸಿದ್ಧರಾಗಿದ್ದರು. ದೊಡ್ಡಾಟ, ಸಣ್ಣಾಟ, ಪಾರಿಜಾತ ನಾಟಕಗಳನ್ನು ಆಧುನಿಕ ರಂಗಭೂಮಿಗೆ ಪರಿಚಯಿಸಿದ್ದರು. ಶ್ರೀಕೃಷ್ಣ ಪಾರಿಜಾತ ನಾಟಕವನ್ನು ಮೂರು ಗಂಟೆಯಲ್ಲಿ ಪ್ರೇಕ್ಷಕರ ಮನಮುಟ್ಟುವಂತೆ ನಿರ್ದೇಶಿಸಿದ್ದ ಶ್ರೀಯುತರು ಜಾನಪದ ಸಂಶೋಧನಾ ಸಂಸ್ಥೆ ಮೂಲಕ ಯುವ ಕಲಾವಿದರು ಹಾಗೂ ಯುವ ಸಮೂಹಕ್ಕೆ ಕಲಾ ತರಬೇತಿಯನ್ನು ನೀಡಿ ಸೈ ಎನಿಸಿಕೊಂಡಿದ್ದರು. ಇವರ ಕಂಚಿನ ಕಂಠದ ಹಾಡುಗಾರಿಕೆಗೆ ಎಲ್ಲರೂ ತಲೆದೂಗುತ್ತಿದ್ದರು. ಕರ್ನಾಟಕ ವಾರ್ತಾ ಇಲಾಖೆಯಿಂದ ಧಾರವಾಡ ಹಾಗೂ ಕಲಬುರಗಿ ವಿಭಾಗ ಮಟ್ಟದ ಬೀದಿ ನಾಟಕ ತರಬೇತಿ ಕಾರ್ಯಾಗಾರದ ನಿರ್ದೇಶಕರಾಗಿಯು ಸೇವೆಯನ್ನು ಸಲ್ಲಿಸಿದ್ದ ಶ್ರೀಯತರು ಅಮೇರಿಕ, ಇಂಗ್ಲೆಂಡ್, ದುಬೈ ಸೇರಿದಂತೆ ವಿಶ್ವದ ಇತರ ರಾಷ್ಟ್ರಗಳಲ್ಲಿ ಶ್ರೀ ಕೃಷ್ಣ ಪಾರಿಜಾತ, ಸಣ್ಣಾಟ ನಾಟಕಗಳ ಪ್ರದರ್ಶನವನ್ನು ನೀಡಿದ್ದರು. ಶ್ರೀಯುತರು ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದರು.

**ಶ್ರೀಯುತರ ನಿಧನದಿಂದ ರಾಜ್ಯವು ಒಬ್ಬ ಅಪರೂಪದ ಜಾನಪದ ಗಾಯಕ ಹಾಗೂ ನಟರನ್ನು ಕಳೆದುಕೊಂಡಂತಾಗಿದೆ.**

## 8. ಮಹದೇವ ಬುದೋ ವೇಳಿಪ

**ಹಿರಿಯ ಜಾನಪದ ಕಲಾವಿದ, ಪರಿಸರ ಸಂರಕ್ಷಕ ಮಹದೇವ ಬುದೋ ವೇಳಿಪರವರು ದಿನಾಂಕ: 10.02.2022ರಂದು ನಿಧನ ಹೊಂದಿರುತ್ತಾರೆ.**

ಶ್ರೀಯುತರು ಮೂಲತ: ಉತ್ತರ ಕನ್ನಡ ಜಿಲ್ಲೆಯವರಾಗಿದ್ದು, ಬುಡಕಟ್ಟು "ಕುಣಬಿ" ಸಂಸ್ಕೃತಿ ಕಲೆಯನ್ನು ಉಳಿಸಿ ಬೆಳೆಸುವ ಕಾಯಕದಲ್ಲಿ ತೊಡಗಿಸಿಕೊಂಡಿದ್ದ ಶ್ರೀಯುತರು ಸಾವಿರಾರು ಜನಪದ ಹಾಡುಗಳನ್ನು ರಚಿಸಿ ಹಾಡುವ ಮೂಲಕ ಅರಿವು ಮೂಡಿಸುತ್ತಿದ್ದರು. ಪರಿಸರದ ಬಗ್ಗೆ ಅಪಾರವಾದ ಅನುಭವವನ್ನು ಹೊಂದಿದ್ದ ಶ್ರೀಯುತರು ಕಾಡಿನಿಂದ ಒಣ ಎಲೆಗಳನ್ನು ತರುವುದನ್ನು ವಿರೋಧಿಸುತ್ತಿದ್ದ ಇವರು ಪರಿಸರ ಸಮತೋಲನದಲ್ಲಿ ಉಣುಗು (ಉಣ್ಣೆ), ಉಂಬಳಗಳೂ ಮಹತ್ವದ ಪಾತ್ರ ಹೊಂದಿವೆ, ಅವಗಳನ್ನು ನಾಶ ಮಾಡಬಾರದು ಎಂದು ಜಾಗೃತಿ ಮೂಡಿಸುತ್ತಿದ್ದರು. ಹಾಗೆಯೇ ಜೇನುನೊಣಗಳ ರಕ್ಷಣೆಗೆ ಹೆಚ್ಚಿನ ಒತ್ತು ನೀಡುತ್ತಿದ್ದರು. ಶ್ರೀಯುತರಿಗೆ ಯಾವ ಹಕ್ಕಿಯ ಕೂಗು ಹೇಗಿರುತ್ತೆ, ಯಾವ ಹಕ್ಕಿ ಯಾವಾಗ ಕೂಗುತ್ತೆ, ಯಾಕೆ ಧ್ವನಿ ಬದಲಿಸುತ್ತೆ ಎಂಬ ಬಗ್ಗೆ ಅಪಾರ ಮಾಹಿತಿಯನ್ನು ಹೊಂದಿದ್ದ ಇವರಿಗೆ ಹಕ್ಕಿಗಳ ಕೂಗನ್ನು ಆಧರಿಸಿ ನಿಖರವಾದ ಸಮಯ ಹೇಳುವುದು ಕರತಗವಾಗಿತ್ತು. ಅವರ ಈ ಸಾಧನೆಯನ್ನು ಪರಿಗಣಿಸಿ 2021ರಲ್ಲಿ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು. ಈ ಪುರಸ್ಕಾರಕ್ಕೆ ಜೊಯಿಡಾ ತಾಲ್ಲೂಕಿನಿಂದ ಪಾತ್ರರಾದ ಮೊದಲ ವ್ಯಕ್ತಿ ಎಂಬ ಹೆಗ್ಗಳಿಕೆಯೂ ಇವರಿಗೆ ಸಲ್ಲುತ್ತದೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಜಾನಪದ ಕಲಾವಿದ, ಪರಿಸರ ಸಂರಕ್ಷಕರೊಬ್ಬರನ್ನು ಕಳೆದುಕೊಂಡಂತಾಗಿದೆ.**

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–**

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

******

**ಕರ್ನಾಟಕ ವಿಧಾನ ಪರಿಷತ್ತು**
**146ನೇ ಅಧಿವೇಶನ**
**ಸಂತಾಪ ಸೂಚನೆ**

**ಮಾನ್ಯ ಸಭಾಪತಿಯವರು:–**

**ರಂಗಭೂಮಿಯ ಹಿರಿಯ ಕಲಾವಿದೆ ಹಾಗೂ ನಟಿ ಭಾರ್ಗವಿ ನಾರಾಯಣ್ ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**ಭಾರ್ಗವಿ ನಾರಾಯಣ್**

**ರಂಗಭೂಮಿಯ ಹಿರಿಯ ಕಲಾವಿದೆ ಹಾಗೂ ನಟಿ ಭಾರ್ಗವಿ ನಾರಾಯಣ್ ರವರು ದಿನಾಂಕ: 14.02.2022ರಂದು ನಿಧನ ಹೊಂದಿರುತ್ತಾರೆ.**

1938ರ ಫೆಬ್ರವರಿ, 4ರಂದು ಜನಿಸಿದ್ದ ಶ್ರೀಯುತರು ಬಿಎಸ್ಸಿ., ಮತ್ತು ಇಂಗ್ಲಿಷ್ ಎಂ.ಎ., ಸ್ನಾತಕೋತ್ತರ ಪದವಿ ಪಡೆದಿದ್ದರು. ರಂಗಭೂಮಿ ಕಲಾವಿದರಾಗಿದ್ದಾಗಲೇ ಮೇಕಪ್ ನಾಣಿ ಎಂದೇ ಹೆಸರಾಗಿದ್ದ ಬೆಳವಾಡಿ ನಂಜುಂಡಯ್ಯ ನಾರಾಯಣ ಅವರನ್ನು ಮದುವೆಯಾದರು. 60ರ ದಶಕದಲ್ಲೇ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ್ದ ಶ್ರೀಯುತರು ಪ್ರೊ. ಹುಚ್ಚುರಾಯ ಚಿತ್ರದಲ್ಲಿನ ಅವರ ನಟನೆಗೆ 1974–75ರ ಸಾಲಿನ ಅತ್ಯುತ್ತಮ ಪೋಷಕ ನಟಿ ರಾಜ್ಯ ಪ್ರಶಸ್ತಿ, ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ, ಅವರ 'ನಾನು ಭಾರ್ಗವಿ' ಎಂಬ ಆತ್ಮಕಥನಕ್ಕೆ ಕರ್ನಾಟಕ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಹಲವು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಂಗಭೂಮಿ ಕಲಾವಿದೆ ಹಾಗೂ ಚಲನಚಿತ್ರ ನಟಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

........................................................................

**ಕರ್ನಾಟಕ ವಿಧಾನ ಪರಿಷತ್ತು**
**146ನೇ ಅಧಿವೇಶನ**
**ಸಂತಾಪ ಸೂಚನೆಗಳು**

**ಮಾನ್ಯ ಸಭಾಪತಿಯವರು:–**

**ವಿಧಾನ ಪರಿಷತ್ತಿನ ಹಾಗೂ ವಿಧಾನಸಭೆಯ ಮಾಜಿ ಶಾಸಕರಾದ ಡಾ: ಹೆಚ್.ಡಿ. ಚೌಡಯ್ಯ ಮತ್ತು ಕನ್ನಡದ ಸಮನ್ವಯ ಕವಿ, ಸುನೀತಗಳ ಸಾಮ್ರಾಟ್ ಚೆನ್ನವೀರ ಕಣವಿ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**1. ಡಾ: ಹೆಚ್.ಡಿ. ಚೌಡಯ್ಯ**

**ವಿಧಾನ ಪರಿಷತ್ತಿನ ಹಾಗೂ ವಿಧಾನಸಭೆಯ ಮಾಜಿ ಶಾಸಕರಾದ ಡಾ: ಹೆಚ್.ಡಿ. ಚೌಡಯ್ಯ ರವರು ದಿನಾಂಕ: 16.02.2022ರಂದು ನಿಧನ ಹೊಂದಿರುತ್ತಾರೆ.**

1928 ರಂದು ಜನಿಸಿದ್ದ ಶ್ರೀಯುತರು ಬಿಎಸ್ಸಿ., (ಕೃಷಿ) ಪದವೀಧರರಾಗಿದ್ದರು. ಮೂಲತ: ರೈತಾಪಿ ಕುಟುಂಬಕ್ಕೆ ಸೇರಿದ್ದ ಶ್ರೀಯುತರು ತಾಲ್ಲೂಕು ಬೋರ್ಡ್ ಸದಸ್ಯರಾಗಿ ಹಾಗೂ ಅಧ್ಯಕ್ಷರಾಗುವ ಮೂಲಕ ರಾಜಕೀಯ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿದ್ದು, ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕಿನ ಅಧ್ಯಕ್ಷರಾಗಿ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿರುತ್ತಾರೆ. ಶಿಕ್ಷಣ ತಜ್ಞರು, ಶಿಸ್ತು, ದಕ್ಷ ಆಡಳಿತಗಾರರಾಗಿದ್ದು, ಹಿರಿಯ ಸಹಕಾರಿ ಧುರೀಣರಾಗಿ, ಕಾವೇರಿ ಹೋರಾಟದ ಮುಂಚೂಣಿ ನಾಯಕರಾಗಿದ್ದರು. ಮಂಡ್ಯದ ಪ್ರತಿಷ್ಠಿತ ಪಿ.ಇ.ಟಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾಗಿ 31 ವರ್ಷಗಳ ಸುದೀರ್ಘ ಸೇವೆಯನ್ನು ಸಲ್ಲಿಸಿ ಸಂಸ್ಥೆಯನ್ನು ರಾಷ್ಟ್ರೀಯ ಅಂತರರಾಷ್ಟ್ರೀಯ ದರ್ಜೆಗೇರಿಸಿರುತ್ತಾರೆ.

1992 ರಿಂದ 1998ರವರೆಗೆ ವಿಧಾನ ಸಭೆಯಿಂದ ಚುನಾಯಿತರಾಗಿ ವಿಧಾನ ಪರಿಷತ್ತಿನ ಶಾಸಕರಾಗಿ ಹಾಗೂ ನಾಲ್ಕು ಬಾರಿ ಕೆರಗೋಡು ಕ್ಷೇತ್ರದಿಂದ ವಿಧಾನಸಭೆಗೆ ಚುನಾಯಿತರಾಗಿದ್ದ ಅವಧಿಯಲ್ಲಿ ಹಂಗಾಮಿ ವಿರೋಧ ಪಕ್ಷದ ನಾಯಕರಾಗಿಯು ಕಾರ್ಯನಿರ್ವಹಿಸಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ದಕ್ಷ ಆಡಳಿತಗಾರ ಹಾಗೂ ಮುತ್ಸದ್ದಿ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**––2**

## 2. ಡಾ: ಚೆನ್ನವೀರ ಕಣವಿ

**ಕನ್ನಡ ಸಾಹಿತ್ಯದ ಹಿರಿಯ ಚೇತನ, ಪ್ರಖ್ಯಾತ ಕವಿ, ನಾಡೋಜ ಪ್ರಶಸ್ತಿ ಪುರಸ್ಕೃತರಾದ ಡಾ: ಚೆನ್ನವೀರ ಕಣವಿರವರು ದಿನಾಂಕ: 16.02.2022ರಂದು ನಿಧನ ಹೊಂದಿರುತ್ತಾರೆ.**

28ನೇ ಜೂನ್, 1928ರಂದು ಗದಗ ಜಿಲ್ಲೆಯ ಹೊಂಬಳ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಪ್ರಾಥಮಿಕ ಶಿಕ್ಷಣವನ್ನು ಹೊಂಬಳ ಗ್ರಾಮದಲ್ಲಿ ಮುಗಿಸಿ, ಮಾಧ್ಯಮಿಕ ಹಾಗೂ ಕಾಲೇಜು ಶಿಕ್ಷಣವನ್ನು ಧಾರವಾಡದಲ್ಲಿ ಪಡೆದಿದ್ದರು. ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಎ. ಪದವೀಧರರಾಗಿದ್ದ ಶ್ರೀಯುತರು ಕರ್ನಾಟಕ ವಿಶ್ವವಿದ್ಯಾಲಯದ ಪ್ರಸಾರಾಂಗ ವಿಭಾಗದ ಕಾರ್ಯದರ್ಶಿಯಾಗಿ ಹಾಗೂ ನಿರ್ದೇಶಕರಾಗಿ ಸೇವೆಯನ್ನು ಸಲ್ಲಿಸಿರುತ್ತಾರೆ. ಹೊಸಗನ್ನಡ ಕಾವ್ಯ ಪರಂಪರೆಯ ಹಿರಿಯ ತಲೆಮಾರಿನ ಕವಿಯೆಂದೇ ಹೆಸರುವಾಸಿಯಾಗಿದ್ದ ಕನ್ನಡದ ಖ್ಯಾತ ವಿದ್ವಾಂಸ, ಕನ್ನಡ ನಾಡಿನ ಸಮನ್ವಯ ಕವಿಯೆಂದೇ ಸಾಹಿತ್ಯ ವಲಯದಲ್ಲಿ ಚಿರಪರಿಚಿತರಾಗಿದ್ದು, ಅವರ ಕಾವ್ಯದಲ್ಲಿ ರಮ್ಯ ಮನೋಧರ್ಮ, ಆದರ್ಶಪ್ರಿಯತೆ, ವ್ಯಕ್ತಿತ್ವ ನಿರ್ಮಾಣದ ಹಂಬಲಗಳು ವಿಶೇಷವಾಗಿ ಕಂಡುಬರುತ್ತವೆ. "ವಿಶ್ವಭಾರತಿಗೆ ಕನ್ನಡದಾರತಿ" ಮೊದಲಾದ ಜನಪ್ರಿಯ ಗೀತೆಗಳನ್ನು ರಚಿಸಿರುತ್ತಾರೆ. ಸುದೀರ್ಘ ಕಾವ್ಯೋದ್ಯೋಗದಲ್ಲಿ ಶ್ರೀಯುತರು ಅನೇಕ ಶ್ರೇಷ್ಠವಾದ ಕವಿತೆಗಳನ್ನು ಬರೆದು ಆಧುನಿಕ ಕನ್ನಡ ಕಾವ್ಯಗಳ ನವ್ಯತೆಯಲ್ಲಿ ವಿಭಿನ್ನತೆ ಕಾಯ್ದುಕೊಂಡ ಕವಿಗಳ ಸಾಲಿನಲ್ಲಿ ಶ್ರೇಷ್ಠರಾಗಿದ್ದಾರೆ.

ಶ್ರೀಯುತರು 36ಕ್ಕೂ ಹೆಚ್ಚು ಗ್ರಂಥಗಳು, 16 ಕವನ ಸಂಕಲನ, 5 ವಿಮರ್ಶಾ ಗ್ರಂಥಗಳು, ಪ್ರಬಂಧ ಸಂಕಲನ, ಮಕ್ಕಳ ಬರಹಗಳು ಸೇರಿದಂತೆ ಹಲವು ಬಗೆಯ ಅಮೂಲ್ಯ ಗ್ರಂಥಗಳನ್ನು ರಚಿಸಿ ಕನ್ನಡ ಸಾಹಿತ್ಯ ಲೋಕಕ್ಕೆ ಅಮೂಲ್ಯವಾದ ಕೊಡುಗೆಯನ್ನು ನೀಡಿರುತ್ತಾರೆ. ಶ್ರೀಯುತರು "ಜೀವಧ್ವನಿ" ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯನ್ನು ಪಡೆದಿದ್ದರು. ಹಾಸನದಲ್ಲಿ ನಡೆದ 65ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ, 2008ರಲ್ಲಿ ನಡೆದ "ಆಳ್ವಾಸ್ ನುಡಿಸಿರಿ" ಸಮ್ಮೇಳನದ ಅಧ್ಯಕ್ಷರಾಗಿಯು ಸೇವೆಯನ್ನು ಸಲ್ಲಿಸಿರುತ್ತಾರೆ.

ಶ್ರೀಯುತರು ಕೇಂದ್ರ ಸಾಹಿತ್ಯ ಅಕಾಡೆಮಿಯ ಜನರಲ್ ಕೌನ್ಸಿಲ್ ಸದಸ್ಯರಾಗಿ, ಕನ್ನಡ ಸಲಹಾ ಸಮಿತಿಯ ಸದಸ್ಯರಾಗಿ ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾಗಿ 2 ಅವಧಿಗೆ ಸೇವೆಯನ್ನು ಸಲ್ಲಿಸಿರುತ್ತಾರೆ.

--3

ಶ್ರೀಯುತರು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಪಂಪ ಪ್ರಶಸ್ತಿ, ನಾಡೋಜ ಪ್ರಶಸ್ತಿ, ಕರ್ನಾಟಕ ಕವಿರತ್ನ ಪ್ರಶಸ್ತಿ ಸೇರಿದಂತೆ ಇತರ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀಯುತರ ನಿಧನದಿಂದಾಗಿ ಕನ್ನಡ ಸಾರಸ್ವತ ಲೋಕದ ಧೃವತಾರೆಯೊಂದು ಕಣ್ಮರೆಯಾದಂತಾಗಿದೆ.**

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–**

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರುಗಳ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

*******

**ಕರ್ನಾಟಕ ವಿಧಾನ ಪರಿಷತ್ತು**
**146ನೇ ಅಧಿವೇಶನ**
**ಸಂತಾಪ ಸೂಚನೆ**

**ಮಾನ್ಯ ಸಭಾಪತಿಯವರು:–**

**ವಿಧಾನ ಪರಿಷತ್ತಿನ ಹಾಗೂ ವಿಧಾನಸಭೆಯ ಮಾಜಿ ಶಾಸಕರಾದ ಮಳ್ಳೂರ್ ಆನಂದ ರಾವ್ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**ಮಳ್ಳೂರ್ ಆನಂದ ರಾವ್**

**ವಿಧಾನ ಪರಿಷತ್ತಿನ ಹಾಗೂ ವಿಧಾನಸಭೆಯ ಮಾಜಿ ಶಾಸಕರಾದ ಮಳ್ಳೂರ್ ಆನಂದ ರಾವ್‌ರವರು ದಿನಾಂಕ: 14.02.2022ರಂದು ನಿಧನ ಹೊಂದಿರುತ್ತಾರೆ.**

2ನೇ ಅಕ್ಟೋಬರ್, 1935 ರಂದು ಶಿಡ್ಲಘಟ್ಟದಲ್ಲಿ ಜನಿಸಿದ್ದ ಶ್ರೀಯುತರು ಎಂ.ಎ., ಬಿ.ಎಡ್. ಪದವೀಧರರಾಗಿದ್ದು ವೃತ್ತಿಯಲ್ಲಿ ಕೃಷಿಕರಾಗಿ, ಹೈನುಗಾರಿಕೆ ನಡೆಸುತ್ತಿದ್ದರು. ಕರ್ನಾಟಕ ರಾಜ್ಯ ಆಗಮತ್ರಯ ಮಹಾಮಂಡಳಿ, ಕರ್ನಾಟಕ ಇ.ಎಸ್.ಐ. ಎಂಪ್ಲಾಯಿಸ್ ಅಸೋಸಿಯೇಷನ್, ಕರ್ನಾಟಕ ಶಾಖೆಯ ಆಲ್ ಇಂಡಿಯಾ ಫೆಡರೇಷನ್ ಆಫ್ ಯುನೈಟೆಡ್ ನೇಷನ್ಸ್ ಅಸೋಸಿಯೇಷನ್ಸ್ ಹಾಗೂ ಹೋಟೆಲ್ ವರ್ಕರ್ಸ್ ಅಂಡ್ ಓನರ್ಸ್ ಕಲ್ಯಾಣ ಸಮಿತಿಯ ಅಧ್ಯಕ್ಷರಾಗಿ, ಮೈಸೂರು ಸ್ಟೇಟ್ ಸೆಕೆಂಡರಿ ಟೀಚರ್ಸ್ ಅಸೋಸಿಯೇಷನ್‌ನ ಪ್ರಧಾನ ಕಾರ್ಯದರ್ಶಿಯಾಗಿ, ಅಖಿಲ ಭಾರತ ಸೆಕೆಂಡರಿ ಟೀಚರ್ಸ್ ಫೆಡರೇಷನ್, ದೆಹಲಿ ಹಾಗೂ ಮುಂಬೈ ಭಾರತೀಯ ಶಿಕ್ಷಣ ಮಂಡಳ ಇವುಗಳ ಜಂಟಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದರು.

ಶ್ರೀಯುತರು 1970 ರಿಂದ 1976ರವರೆಗೆ ಶಿಕ್ಷಕರ ಕ್ಷೇತ್ರದಿಂದ ಪಕ್ಷೇತರರಾಗಿ ಚುನಾಯಿತರಾಗಿ ವಿಧಾನ ಪರಿಷತ್ತಿನ ಶಾಸಕರಾಗಿ ಹಾಗೂ 1978ರಲ್ಲಿ ರಾಜಾಜಿನಗರ ವಿಧಾನಸಭಾ ಕ್ಷೇತ್ರದಿಂದ 6ನೇ ವಿಧಾನಸಭೆಯ ಸದಸ್ಯರಾಗಿ ಕಾರ್ಯನಿರ್ವಹಿಸಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**---2**

**<u>ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-</u>**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

*******

**ಕರ್ನಾಟಕ ವಿಧಾನ ಪರಿಷತ್ತು**

**146ನೇ ಅಧಿವೇಶನ**

**ಸಂತಾಪ ಸೂಚನೆ**

**ಮಾನ್ಯ ಸಭಾಪತಿಯವರು:–**

**ರಂಗಭೂಮಿಯ ಹಿರಿಯ ಕಲಾವಿದ ಹಾಗೂ ಕನ್ನಡ ಚಲನಚಿತ್ರರಂಗದ ಶ್ರೇಷ್ಠ ನಟ, ಕಲಾತಪಸ್ವಿ ಡಾ: ರಾಜೇಶ್ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**ಡಾ: ರಾಜೇಶ್**

**ರಂಗಭೂಮಿಯ ಹಿರಿಯ ಕಲಾವಿದ ಹಾಗೂ ಕನ್ನಡ ಚಲನಚಿತ್ರರಂಗದ ನಟ, ಕಲಾತಪಸ್ವಿ ಡಾ: ರಾಜೇಶ್‌ರವರು ದಿನಾಂಕ: 19.02.2022ರಂದು ನಿಧನ ಹೊಂದಿರುತ್ತಾರೆ.**

15ನೇ ಏಪ್ರಿಲ್, 1935 ರಂದು ಬೆಂಗಳೂರಿನಲ್ಲಿ ಜನಿಸಿದ್ದ ಶ್ರೀಯುತರು ಲೋಕೋಪಯೋಗಿ ಇಲಾಖೆಯಲ್ಲಿ ಶೀಘ್ರಲಿಪಿಗಾರರಾಗಿ ಕಾರ್ಯನಿರ್ವಹಿಸಿದ್ದರು. ಇವರ ಮೂಲ ಹೆಸರು ಮುನಿ ಚೌಡಪ್ಪ ಆಗಿತ್ತು. ಪ್ರೌಢಶಾಲಾ ದಿನಗಳಲ್ಲಿಯೇ ರಂಗಭೂಮಿಯ ಸೆಳೆತ ಅಪಾರವಾಗಿದ್ದು, ಸುದರ್ಶನ್ ನಾಟಕ ಮಂಡಳಿಯಲ್ಲಿ ಪಾತ್ರ ನಿರ್ವಹಿಸತೊಡಗಿದ್ದರು. ಶ್ರೀಯುತರು ತಮ್ಮದೇ ಆದ "ಶಕ್ತಿ ನಾಟಕ ಮಂಡಳಿ"ಯನ್ನು ಸ್ಥಾಪಿಸಿ, ನಿರುದ್ಯೋಗಿ ಬಾಳು, ಬಡವ ಬಾಳು, ವಿಷಸರ್ಪ, ನಂದಾದೀಪ ಮುಂತಾದ ನಾಟಕಗಳನ್ನು ನಾಡಿನೆಲ್ಲೆಡೆ ಪ್ರದರ್ಶಿಸಿರುತ್ತಾರೆ. ನಾಟಕಗಳಲ್ಲಿನ ಜನಪ್ರಿಯತೆ ಚಿತ್ರರಂಗಕ್ಕೂ ಪಾದಾರ್ಪಣೆ ಮಾಡುವಂತಾಗಿ ಶ್ರೀಯುತರು "ವೀರಸಂಕಲ್ಪ" ಚಿತ್ರದ ಮೂಲಕ ಚಲನ ಚಿತ್ರರಂಗಕ್ಕೆ ಪ್ರವೇಶ ಮಾಡಿದರು. 1968 ರಲ್ಲಿ "ನಮ್ಮ ಊರು" ಚಿತ್ರದಿಂದ ಪ್ರಸಿದ್ಧಿ ಹೊಂದಿದ ಶ್ರೀಯುತರು ಸತೀ ಸುಕನ್ಯ, ಭಲೇ ಭಾಸ್ಕರ, ಪಿತಾಮಹ, ಗಂಗೇ ಗೌರಿ ಮುಂತಾದ 150ಕ್ಕೂ ಹೆಚ್ಚು ನಾಯಕ ಪ್ರಧಾನ ಪಾತ್ರಗಳು ಹಾಗೂ ವೈವಿಧ್ಯಮಯ ಪೋಷಕ ಪಾತ್ರಗಳಲ್ಲಿ ನಟಿಸಿರುತ್ತಾರೆ.

ಶ್ರೀಯುತರ ನಟನಾ ಪ್ರೌಡಿಮೆ, ಭಾಷಾ ಉಚ್ಚಾರ, ಭಾವಾಭಿನಯ ಉತ್ತಮ ಮಟ್ಟದ್ದಾಗಿದ್ದು, ಡಾ: ರಾಜ್ ಕುಮಾರ್, ಉದಯ ಕುಮಾರ್, ಕಲ್ಯಾಣ್ ಕುಮಾರ್ ಅವರ ಸಮಕಾಲೀನರಾಗಿ ಅಂತಹ ಮಹಾನ್ ಪ್ರತಿಭೆಗಳ ಕಾಲದಲ್ಲಿಯೂ ಕೂಡ ತಮ್ಮದೇ ಆದ ವಿಶಿಷ್ಟ ಛಾಪನ್ನು ಮೂಡಿಸಿದ್ದ ಶ್ರೀಯುತರು ಶಿಸ್ತಿನ ಸಿಪಾಯಿ ಎಂದೇ ಪ್ರಖ್ಯಾತರಾಗಿದ್ದರು. ಇವರಿಗೆ ಹಲವಾರು ಪ್ರಶಸ್ತಿ ಗೌರವಗಳು ಅರಿಸಿ ಬಂದಿದ್ದರೂ, ಇವಕ್ಕೆಲ್ಲಾ ಶಿಖರ ಪ್ರಾಯದಂತೆ ಇವರ ಕಲಾ ಸೇವೆಯನ್ನು ಪರಿಗಣಿಸಿ ಧಾರವಾಡ ವಿಶ್ವವಿದ್ಯಾಲಯ ಶ್ರೀಯುತರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಿರುತ್ತದೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ರಂಗಭೂಮಿಯ ಹಿರಿಯ ಕಲಾವಿದ ಹಾಗೂ ಕನ್ನಡ ಚಲನಚಿತ್ರರಂಗದ ಹಿರಿಯ ನಟರೊಬ್ಬರನ್ನು ಕಳೆದುಕೊಂಡಂತಾಗಿದೆ.**

**---2**

**<u>ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–</u>**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

*******